**Akashvani : Bangalore**
**National Bulletin In Kannada**
**01.04.2024 / 13.10 hrs**

**ಆಕಾಶವಾಣಿ, ಬೆಂಗಳೂರು**

**ರಾಷ್ಟ್ರೀಯ ವಾರ್ತೆಗಳು**

**01.04.2024 / 13.10 hrs**

**<><*<><>*><>**

<u>ಮುಖ್ಯಾಂಶಗಳು</u>

೧. ದೇಶದ ಆರ್ಥಿಕ ಸುಧಾರಣೆಯಲ್ಲಿ ಭಾರತೀಯ ಬ್ಯಾಂಕಿಂಗ್ ಕ್ಷೇತ್ರದ ಪರಿವರ್ತನೆ ಅತ್ಯುತ್ತಮ ನಿದರ್ಶನ - ಪ್ರಧಾನಿ ನರೇಂದ್ರ ಮೋದಿ

೨. ಇಂದಿನಿಂದ ಹಣಕಾಸು ವರ್ಷ ಆರಂಭ : ಯಾವುದೇ ಹೊಸ ಬದಲಾವಣೆ ಇಲ್ಲ - ಹಣಕಾಸು ಸಚಿವಾಲಯ ಸ್ಪಷ್ಟನೆ

೩. ತ್ರಿವಿಧ ದಾಸೋಹಿ ಸಿದ್ದಗಂಗಾ ಶಿವಕುಮಾರ ಸ್ವಾಮೀಜಿ ಜಯಂತಿ ಅಂಗವಾಗಿ ಅವರ ಸೇವೆ ಸ್ಮರಿಸಿದ ಪ್ರಧಾನಿ

೪. ಐಪಿಎಲ್ ಕ್ರಿಕೆಟ್ : ಮುಂಬೈ ಇಂಡಿಯನ್ಸ್ ಮತ್ತು ರಾಜಸ್ಥಾನ್ ರಾಯಲ್ಸ್ ನಡುವೆ ಇಂದು ಹಣಾಹಣಿ

**<><*<><>*><>**

ದೇಶದ ಆರ್ಥಿಕತೆ ಸುಧಾರಣೆಯಲ್ಲಿ ಭಾರತೀಯ ಬ್ಯಾಂಕಿಂಗ್ ಕ್ಷೇತ್ರದ ಪರಿವರ್ತನೆ ಅತ್ಯುತ್ತಮ ನಿದರ್ಶನ ಎಂದು ಪ್ರಧಾನಿ ನರೇಂದ್ರ ಮೋದಿ ಇಂದು ಹೇಳಿದ್ದಾರೆ. ಮುಂಬೈನಲ್ಲಿ ಭಾರತೀಯ ರಿಸರ್ವ್ ಬ್ಯಾಂಕ್-ಆರ್‌ಬಿಐನ ೯೦ ವರ್ಷಗಳ ಸ್ಮರಣಾರ್ಥ ಆಯೋಜನೆಗೊಂಡಿದ್ದ ಸಮಾರಂಭವನ್ನುದ್ದೇಶಿಸಿ ಪ್ರಧಾನಿ ಮಾತನಾಡಿದರು. ಸಾರ್ವಜನಿಕ ವಲಯದ ಬ್ಯಾಂಕ್‌ಗಳ ಪುನಶ್ಚೇತನಕ್ಕಾಗಿ ಸರ್ಕಾರ ೩.೫ ಲಕ್ಷ ಕೋಟಿ ರೂಪಾಯಿ ಬಂಡವಾಳ ಹೂಡಿದೆ ಎಂದು ಅವರು ಹೇಳಿದರು. ದೇಶದ ಜಿಡಿಪಿ ವಿತ್ತೀಯ ಮತ್ತು ಹಣಕಾಸು ನೀತಿಗಳ ನಡುವಿನ ಸಮನ್ವಯವನ್ನು ಅವಲಂಬಿಸಿದೆ ಎಂದ ಪ್ರಧಾನಿ, ಆರ್‌ಬಿಐ ತನ್ನ ವೃತ್ತಿಪರತೆ ಮತ್ತು ಬದ್ಧತೆಗೆ ವಿಶ್ವದಲ್ಲೇ ಹೆಸರುವಾಸಿಯಾಗಿದೆ ಎಂದರು. ವಿತ್ತೀಯ ಬಿಗಿತದ ಹೊರತಾಗಿಯೂ ಸರ್ಕಾರಿ ಬಾಂಡ್‌ಗಳಲ್ಲಿ ಹೂಡಿಕೆ ಸ್ಥಿರಗೊಳಿಸುವಲ್ಲಿ ಹಾಗೂ ಹಣದುಬ್ಬರದ ನಿರೀಕ್ಷೆಗಳನ್ನು ನಿಯಂತ್ರಿಸುವಲ್ಲಿ ಕೇಂದ್ರೀಯ ಬ್ಯಾಂಕ್ ಯಶಸ್ವಿಯಾಗಿದೆ. ಆ ಮೂಲಕ ದೇಶ ವಿಕಸಿತ ಭಾರತದ ಗುರಿ ಸಾಧಿಸಲು ಈ ದಶಕ

ಮಹತ್ವದ್ದಾಗಿದೆ ಎಂದು ಪ್ರಧಾನಿ ಪ್ರತಿಪಾದಿಸಿದರು. ಬಳಿಕ ಮಾತನಾಡಿದ ಆರ್‌ಬಿಐ ಗವರ್ನರ್ ಶಕ್ತಿಕಾಂತ ದಾಸ್, ಒಂದು ಸಂಸ್ಥೆಯಾಗಿ ರಿಸರ್ವ್ ಬ್ಯಾಂಕ್‌ನ ವಿಕಾಸವು ಭಾರತೀಯ ಆರ್ಥಿಕತೆಯ ಅಭಿವೃದ್ಧಿಯೊಂದಿಗೆ ನಿಕಟ ಸಂಬಂಧ ಹೊಂದಿದೆ. ಇದರೊಂದಿಗೆ ಆರ್‌ಬಿಐ ಮಾರುಕಟ್ಟೆ ಆರ್ಥಿಕತೆಗೆ ಅನುವು ಮಾಡಿಕೊಡುತ್ತದೆ ಎಂದು ಹೇಳಿದರು. ಕಾರ್ಯಕ್ರಮದಲ್ಲಿ ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಮತ್ತು ವಿತ್ತ ಖಾತೆ ರಾಜ್ಯ ಸಚಿವರಾದ ಭಾಗವತ್ ಕಿಶನ್ ರಾವ್ ಕರಾಡ್ ಮತ್ತು ಪಂಕಜ್ ಚೌಧರಿ ಭಾಗವಹಿಸಿದ್ದರು. ಮಹಾರಾಷ್ಟ್ರ ಮುಖ್ಯಮಂತ್ರಿ ಏಕನಾಥ್ ಶಿಂಧೆ ಮತ್ತು ಉಪಮುಖ್ಯಮಂತ್ರಿಗಳಾದ ದೇವೇಂದ್ರ ಫಡ್ನವಿಸ್ ಮತ್ತು ಅಜಿತ್ ಪವಾರ್, ವಿವಿಧ ಬ್ಯಾಂಕ್‌ಗಳು ಮತ್ತು ಉದ್ಯಮಗಳ ಪ್ರತಿನಿಧಿಗಳು ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

<><*<><>*><>

ಇಂದಿನಿಂದ ಆರಂಭವಾಗುವ ಹಣಕಾಸು ವರ್ಷದಲ್ಲಿ ಯಾವುದೇ ಹೊಸ ಬದಲಾವಣೆಗಳನ್ನು ಮಾಡಲು ನಿರ್ಧರಿಸಿಲ್ಲ ಎಂದು ಹಣಕಾಸು ಸಚಿವಾಲಯ ಸ್ಪಷ್ಟಪಡಿಸಿದೆ. ಹೊಸ ತೆರಿಗೆ ಪದ್ಧತಿಗೆ ಸಂಬಂಧಿಸಿದಂತೆ ಕೆಲವು ಸಾಮಾಜಿಕ ಮಾಧ್ಯಮ ವೇದಿಕೆಗಳಲ್ಲಿ ಪ್ರಸಾರವಾಗುತ್ತಿರುವ ತಪ್ಪುದಾರಿಗೆಳೆಯುವ ಮಾಹಿತಿಯನ್ನು ಸಚಿವಾಲಯ ನಿರಾಕರಿಸಿದೆ. ಹೊಸ ತೆರಿಗೆ ಪದ್ಧತಿ ಪ್ರಾಥಮಿಕವಾಗಿ ಕಂಪನಿಗಳು ಮತ್ತು ಸಂಸ್ಥೆಗಳನ್ನು ಹೊರತುಪಡಿಸಿ ವ್ಯಕ್ತಿಗಳಿಗೆ ಅನ್ವಯಿಸುತ್ತದೆ ಎಂದು ಸಚಿವಾಲಯ ಹೇಳಿದೆ. ಹೊಸ ತೆರಿಗೆ ಪದ್ಧತಿಯಲ್ಲಿ, ತೆರಿಗೆ ದರಗಳು ಗಣನೀಯವಾಗಿ ಕಡಿಮೆಯಾಗಿವೆ. ವಿವಿಧ ವಿನಾಯಿತಿಗಳು ಮತ್ತು ಕಡಿತಗಳ ಲಾಭವು ಹಳೆಯ ಆಡಳಿತದಲ್ಲಿ ಇದ್ದಂತೆ ಸಂಬಳದಿಂದ ೫೦,೦೦೦ ರೂಪಾಯಿಗಳು ಮತ್ತು ಕುಟುಂಬ ಪಿಂಚಣಿಯಿಂದ ೧೫,೦೦೦ ರೂಪಾಯಿಗಳು ಲಭ್ಯವಿರುವುದಿಲ್ಲ. ಹೊಸ ತೆರಿಗೆ ಪದ್ಧತಿಯು ಡೀಫಾಲ್ಟ್ ತೆರಿಗೆ ಪದ್ಧತಿಯಾಗಿದೆ. ಆದರೂ ತೆರಿಗೆದಾರರು ತಮಗೆ ಲಾಭದಾಯಕವೆಂದು ಭಾವಿಸುವ ತೆರಿಗೆ ಪದ್ಧತಿಯನ್ನು ಆಯ್ಕೆ ಮಾಡಿಕೊಳ್ಳಬಹುದು ಎಂದು ಸಚಿವಾಲಯ ಹೇಳಿದೆ. ೨೦೨೪-೨೫ರ ಮೌಲ್ಯಮಾಪನ ವರ್ಷಕ್ಕೆ ರಿಟರ್ನ್ಸ್ ಸಲ್ಲಿಸುವವರೆಗೆ ಹೊಸ ತೆರಿಗೆ ಪದ್ಧತಿಯಿಂದ ಹೊರಗುಳಿಯುವ ಆಯ್ಕೆ ಲಭ್ಯವಿದೆ ಎಂದು ಸಚಿವಾಲಯ ತಿಳಿಸಿದೆ.

<><*<><>*><>

ಬಿಜೆಪಿಯ ಹಿರಿಯ ನಾಯಕ ಮತ್ತು ಪ್ರಧಾನಿ ನರೇಂದ್ರ ಮೋದಿ ಅವರು ಇಂದು ಕಚ್ಚತೀವು ದ್ವೀಪ ವಿವಾದಕ್ಕೆ ಸಂಬಂಧಿಸಿದಂತೆ ಡಿಎಂಕೆಯನ್ನು ಟೀಕಿಸಿದ್ದಾರೆ. ತಮಿಳುನಾಡಿನ ಹಿತಾಸಕ್ತಿಗಳನ್ನು ಕಾಪಾಡಲು ಆ ಪಕ್ಷ ಏನನ್ನೂ ಮಾಡಿಲ್ಲ ಎಂದು ಅವರು ಆರೋಪಿಸಿದ್ದಾರೆ. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಪ್ರಧಾನಿ, ಕಚ್ಚತೀವು ವಿಷಯದ ಕುರಿತು ಹೊರಹೊಮ್ಮುತ್ತಿರುವ ಹೊಸ ವಿವರಗಳು ಡಿಎಂಕೆಯ ದ್ವಂದ್ವ ನೀತಿಯನ್ನು ಸಂಪೂರ್ಣವಾಗಿ ಹೊರಹಾಕಿವೆ ಎಂದು ತಿಳಿಸಿದ್ದಾರೆ. ೧೯೭೪ ರಲ್ಲಿ

ಭಾರತ ಮತ್ತು ಶ್ರೀಲಂಕಾ ನಡುವೆ ಒಪ್ಪಂದಕ್ಕೆ ಸಹಿ ಹಾಕಲಾಯಿತು, ಅದರ ಅಡಿಯಲ್ಲಿ ಕಚ್ಚತೀವು ದ್ವೀಪವನ್ನು ಅಂದಿನ ಕಾಂಗ್ರೆಸ್ ಸರ್ಕಾರ ಶ್ರೀಲಂಕಾಕ್ಕೆ ನೀಡಿತು. ಈ ವಿಷಯದ ಬಗ್ಗೆ ಅಂದಿನ ತಮಿಳುನಾಡು ಮುಖ್ಯಮಂತ್ರಿ ಎಂ. ಕರುಣಾನಿಧಿ ಅವರನ್ನು ಅಂದಿನ ಪ್ರಧಾನಿ ಇಂದಿರಾಗಾಂಧಿ ವಿಶ್ವಾಸಕ್ಕೆ ತೆಗೆದುಕೊಂಡಿದ್ದರು ಮತ್ತು ಡಿಎಂಕೆ, ಒಪ್ಪಂದದ ವಿರುದ್ಧ ಸಾರ್ವಜನಿಕ ನಿಲುವು ವ್ಯಕ್ತಪಡಿಸಿದ ಹೊರತಾಗಿಯೂ ಅವರು ಒಪ್ಪಂದಕ್ಕೆ ಒಪ್ಪಿಗೆ ನೀಡಿದ್ದಾರೆ ಎಂದು ಮಾಧ್ಯಮ ವರದಿಯನ್ನು ಉಲ್ಲೇಖಿಸಿ ಪ್ರಧಾನಿ ಮೋದಿ ಹೇಳಿದ್ದಾರೆ . ಕಚ್ಚತೀವು ಮೇಲಿನ ಅವರ ಉದಾಸೀನತೆ, ವಿಶೇಷವಾಗಿ ಬಡ ಮೀನುಗಾರರು ಮತ್ತು ಮೀನುಗಾರ ಮಹಿಳೆಯರ ಹಿತಾಸಕ್ತಿಗಳಿಗೆ ಧಕ್ಕೆ ತಂದಿದೆ ಎಂದು ಪ್ರಧಾನಿ ಆರೋಪಿಸಿದ್ದಾರೆ. ಇಂದು ಬೆಳಗ್ಗೆ ನವದೆಹಲಿಯಲ್ಲಿ ಮಾಧ್ಯಮಗಳಿಗೆ ಕಚ್ಚತೀವು ವಿವಾದದ ಕುರಿತು ಮಾಹಿತಿ ನೀಡಿದ ಬಿಜೆಪಿಯ ಹಿರಿಯ ನಾಯಕ ಮತ್ತು ವಿದೇಶಾಂಗ ಸಚಿವ ಡಾ.ಎಸ್. ಜಯಶಂಕರ್, ತಮಿಳುನಾಡಿನ ಆಡಳಿತಾರೂಢ ಪಕ್ಷ, ಕಚ್ಚತೀವುವನ್ನು ಶ್ರೀಲಂಕಾಕ್ಕೆ ಹಸ್ತಾಂತರಿಸುವುದನ್ನು ಪ್ರಶ್ನಿಸುತ್ತದೆ ಮತ್ತು ಆ ಸಮಯದಲ್ಲಿ ಈ ಕುರಿತು ತಮಿಳುನಾಡು ಸರ್ಕಾರವನ್ನು ಸಂಪರ್ಕಿಸಿಲ್ಲ ಎಂದು ಹೇಳುತ್ತದೆ, ಆದರೆ ಅದು ಈ ಕುರಿತ ಸಂಪೂರ್ಣ ಮಾಹಿತಿಯನ್ನು ಹೊಂದಿತ್ತು ಎಂದು ಹೇಳಿದರು. ಕಾಂಗ್ರೆಸ್ ಮತ್ತು ಡಿಎಂಕೆ ಎರಡೂ ಪಕ್ಷಗಳು ಈ ವಿಷಯದಲ್ಲಿ ಬೇಜಾವ್ದಾರಿ ಇಂದ ನಡೆದುಕೊಂಡಿವೆ ಎಂದು ಅವರು ಆರೋಪಿಸಿದರು.

<><*<><>*><>

ಕರ್ನಾಟಕದ ತುಮಕೂರು ಸಿದ್ಧಗಂಗಾ ಮಠದಲ್ಲಿಂದು ತ್ರಿವಿಧ ದಾಸೋಹಿ ಎಂದೇ ಜನಜನಿತರಾಗಿರುವ ಲಿಂಗೈಕ್ಯ, ಡಾ. ಶಿವಕುಮಾರ ಸ್ವಾಮೀಜಿ ಅವರ ೧೧೭ ನೇ ಜಯಂತಿ ಹಾಗೂ ಗುರುವಂದನಾ ಮಹೋತ್ಸವವನ್ನು ಆಚರಿಸಲಾಗುತ್ತಿದೆ. ಪ್ರಧಾನಮಂತ್ರಿ ನರೇಂದ್ರ ಮೋದಿಯವರು, ಆಧ್ಯಾತ್ಮಿಕ ನಾಯಕ, ಮತ್ತು ಶಿಕ್ಷಣತಜ್ಞ ಡಾ. ಶ್ರೀ ಶಿವಕುಮಾರ ಸ್ವಾಮಿಗಳ ಜನ್ಮದಿನದಂದು ಅವರಿಗೆ ನಮನ ಸಲ್ಲಿಸಿದ್ದಾರೆ. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ, ನರೇಂದ್ರಮೋದಿ ಅವರು, ಡಾ. ಶಿವಕುಮಾರಸ್ವಾಮಿಗಳು ಸಮಾಜ ಸೇವೆಗೆ ಅಪ್ರತಿಮ ಕೊಡುಗೆಗಳನ್ನು ನೀಡಿದ್ದಾರೆ, ನಿಸ್ವಾರ್ಥತೆ ಮತ್ತು ಸಹಾನುಭೂತಿಯ ನಿಜವಾದ ಮನೋಭಾವವನ್ನು ಸಾಕಾರಗೊಳಿಸಿದ್ದಾರೆ ಎಂದು ಸ್ಮರಿಸಿದ್ದಾರೆ. ಶಿಕ್ಷಣ, ಆರೋಗ್ಯ ಮತ್ತು ಸಮಾಜ ಕಲ್ಯಾಣದಲ್ಲಿ ಸ್ವಾಮಿಗಳು ಕೈಗೊಂಡಿರುವ ಕಾರ್ಯಗಳು ಲಕ್ಷಾಂತರ ಮಂದಿಯ ಜೀವನಕ್ಕೆ ನೆರವಾಗಿ, ಸಮರ್ಪಣೆ ಮತ್ತು ಮಾನವೀಯ ಸೇವೆಗೆ ಉದಾಹರಣೆಯಾಗಿದೆ ಎಂದು ಪ್ರಧಾನಿ ಶ್ಲಾಘಿಸಿದ್ದಾರೆ.

<><*<><>*><>

ಕರ್ನಾಟಕ ರಾಜ್ಯದ ೨೮ ಲೋಕಸಭಾ ಮತಕ್ಷೇತ್ರಗಳಲ್ಲಿ ಏಪ್ರಿಲ್ ೨೬ ಮತ್ತು ಮೇ ೭ ರಂದು ನಡೆಯಲಿರುವ ಚುನಾವಣೆ ಸಂಬಂಧ ಚುನಾವಣಾಧಿಕಾರಿಗಳು ಕಟ್ಟೆಚ್ಚರ ವಹಿಸಿದ್ದಾರೆ. ಎಲ್ಲಾ

ಮತಕ್ಷೇತ್ರಗಳಲ್ಲಿ ಅಕ್ರಮ ವಹಿವಾಟುಗಳ ಮೇಲೆ ನಿಕಟ ನಿಗಾ ಇಡಲಾಗಿದೆ. ಇದುವರೆಗೆ ಎಲ್ಲಾ ಚುನಾವಣಾ ಚೆಕ್‌ಪೋಸ್ಟ್‌ಗಳಲ್ಲಿ ಕೈಗೊಂಡಿರುವ ಕಾರ್ಯಾಚರಣೆಗಳ ಮೂಲಕ ದಾಖಲೆ ಇಲ್ಲದೇ ಸಾಗಿಸುತ್ತಿದ್ದ ೨೩ ಕೋಟಿ ೧೯ ಲಕ್ಷದ ೩೦ ಸಾವಿರದ ೧೦೬ ರೂಪಾಯಿ ನಗದನ್ನು ವಶಪಡಿಸಿಕೊಳ್ಳಲಾಗಿದೆ. ೧ ಕೋಟಿ ೭೩ ಲಕ್ಷ ೬ ಸಾವಿರದ ೨೨೩ ರೂಪಾಯಿ ಮೌಲ್ಯದ ವಿವಿಧ ವಸ್ತುಗಳು ಹಾಗೂ ೨೯ ಕೋಟಿ ೧ ಲಕ್ಷ ೩೭ ಸಾವಿರದ ೯೩೦ ರೂಪಾಯಿ ಮೌಲ್ಯದ ಮದ್ಯ ಮತ್ತು ೧ ಕೋಟಿ ೬೩ ಲಕ್ಷ ೯೬ ಸಾವಿರದ ೬೬೦ ರೂಪಾಯಿ ಮೌಲ್ಯದ ಮಾದಕ ವಸ್ತುಗಳನ್ನು ವಶಪಡಿಸಿಕೊಳ್ಳಲಾಗಿದೆ. ೭೨ ಕೋಟಿ ೮೪ ಲಕ್ಷ ೩೧ ಸಾವಿರದ ೮೧೪ ರೂಪಾಯಿ ಬೆಲೆ ಬಾಳುವ ಚಿನ್ನ ಮತ್ತು ವಜ್ರದ ಆಭರಣಗಳನ್ನು ಜಪ್ತಿ ಮಾಡಲಾಗಿದೆ. ಒಟ್ಟು ೧ ಸಾವಿರದ ೮೭ ಎಫ್‌ಐಆರ್‌ಗಳನ್ನು ದಾಖಲಿಸಲಾಗಿದೆ ಎಂದು ರಾಜ್ಯ ಮುಖ್ಯ ಚುನಾವಣಾಧಿಕಾರಿಗಳ ಪತ್ರಿಕಾ ಪ್ರಕಟಣೆಯಲ್ಲಿ ಮಾಹಿತಿ ನೀಡಲಾಗಿದೆ. ರಾಜ್ಯದಲ್ಲಿ ಸಿ-ವಿಜಿಲ್ ೧೧ ಸಾವಿರದ ೨೩೧ ದೂರುಗಳನ್ನು ಸ್ವೀಕರಿಸಲಾಗಿದೆ. ಸ್ವೀಕರಿಸಿದ ಪ್ರಮುಖ ೬ ಸಾವಿರದ ೯೮೬ ದೂರುಗಳು ಅನುಮತಿಯಿಲ್ಲದ ಪೋಸ್ಟರ್‌ಗಳು/ಬ್ಯಾನರ್‌ಗಳಿಗೆ ಸಂಬಂಧಿಸಿವೆ.

<><*<><>*><>

ಮದ್ಯ ನೀತಿ ಹಗರಣಕ್ಕೆ ಸಂಬಂಧಿಸಿದ ಅಕ್ರಮ ಹಣ ವರ್ಗಾವಣೆ ಪ್ರಕರಣದಲ್ಲಿ ದೆಹಲಿ ಮುಖ್ಯಮಂತ್ರಿ ಮತ್ತು ಆಮ್ ಆದ್ಮಿ ಪಕ್ಷದ ನಾಯಕ ಅರವಿಂದ್ ಕೇಜ್ರಿವಾಲ್ ಅವರನ್ನು ದೆಹಲಿ ನ್ಯಾಯಾಲಯ ಈ ತಿಂಗಳ ೧೫ ರವರೆಗೆ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿದೆ. ಎಎಪಿ ನಾಯಕನನ್ನು ಮಾರ್ಚ್ ೨೧ ರಂದು ಜಾರಿ ನಿರ್ದೇಶನಾಲಯ ಬಂಧಿಸಿತ್ತು. ಇಡಿ ಕಸ್ಟಡಿ ಅವಧಿ ಮುಗಿದ ಹಿನ್ನೆಲೆಯಲ್ಲಿ ಮುಖ್ಯಮಂತ್ರಿ ಕೇಜ್ರಿವಾಲ್ ಅವರನ್ನು ನ್ಯಾಯಾಲಯಕ್ಕೆ ಹಾಜರುಪಡಿಸಿದ ನಂತರ ರೋಸ್ ಅವೆನ್ಯೂ ನ್ಯಾಯಾಲಯದ ವಿಶೇಷ ಸಿಬಿಐ ನ್ಯಾಯಾಧೀಶರಾದ ಕಾವೇರಿ ಬವೇಜಾ ಈ ಆದೇಶ ಹೊರಡಿಸಿದ್ದಾರೆ. ಇದಕ್ಕೂ ಮೊದಲು, ಕಳೆದ ತಿಂಗಳು ೨೨ ರಂದು, ವಿಚಾರಣಾ ನ್ಯಾಯಾಲಯ ಕೇಜ್ರಿವಾಲ್ ಅವರನ್ನು ಆರು ದಿನಗಳ ಇಡಿ ವಶಕ್ಕೆ ನೀಡಿತು, ಬಳಿಕ ಅದನ್ನು ಇನ್ನೂ ನಾಲ್ಕು ದಿನಗಳವರೆಗೆ ವಿಸ್ತರಿಸಲಾಯಿತು. ಆಮ್ ಆದ್ಮಿ ಪಕ್ಷದ ನಾಯಕ ಮನೀಶ್ ಸಿಸೋಡಿಯಾ ಮತ್ತು ಸಂಜಯ್ ಸಿಂಗ್ ಕೂಡ ಈ ಪ್ರಕರಣದಲ್ಲಿ ಆರೋಪಿಗಳಾಗಿದ್ದು, ಪ್ರಸ್ತುತ ನ್ಯಾಯಾಂಗ ಬಂಧನದಲ್ಲಿದ್ದಾರೆ.

<><*<><>*><>

ಪಶ್ಚಿಮ ಬಂಗಾಳದ ಜಲ್ಪೈಗುರಿ ಜಿಲ್ಲೆಯಲ್ಲಿ ಭಾರೀ ಚಂಡಮಾರುತಕ್ಕೆ ನಿನ್ನೆ ಕನಿಷ್ಠ ನಾಲ್ಕು ಮಂದಿ ಸಾವಿಗೀಡಾಗಿದ್ದು ೧೦೦ ಕ್ಕೂ ಹೆಚ್ಚು ಜನರು ಗಾಯಗೊಂಡಿದ್ದಾರೆ. ಚಂಡಮಾರುತ ಸಹಿತ ರಭಸ ಗಾಳಿಗೆ ಜಿಲ್ಲೆಯ ಹಲವು ಕಡೆ ಮರಗಳು ಧರೆಗುರುಳಿದ್ದು ಕೆಲ ಮನೆಗಳಿಗೆ ಹಾನಿಯಾಗಿದೆ. ನಾಗರಿಕ

ಆಡಳಿತ, ಪೊಲೀಸ್ ಮತ್ತು ವಿಪತ್ತು ನಿರ್ವಹಣೆಯ ಸಿಬ್ಬಂದಿಯನ್ನು ಪರಿಹಾರ ಕಾರ್ಯಕ್ಕಾಗಿ ನಿಯೋಜಿಸಲಾಗಿದೆ ಎಂದು ಪಶ್ಚಿಮ ಬಂಗಾಳ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ಹೇಳಿದ್ದಾರೆ.

<><*<><>*><>

ಇಂದು ರಾತ್ರಿ ೯.೩೦ ಗಂಟೆಗೆ ಆಕಾಶವಾಣಿಯ ದ್ವಿಭಾಷಾ ಲೈವ್ ಫೋನ್-ಇನ್ ಕಾರ್ಯಕ್ರಮ “ಪಬ್ಲಿಕ್ ಸ್ಪೀಕ್” ನಲ್ಲಿ “ಸುಲಭವಾಗಿ ಆದಾಯ ತೆರಿಗೆ ರಿಟರ್ನ್ ಸಲ್ಲಿಸುವಿಕೆ” ಕುರಿತು ಒಳನೋಟವುಳ್ಳ ಚರ್ಚೆ ನಡೆಯಲಿದೆ. ಕಾರ್ಯಕ್ರಮದ ಸಮಯದಲ್ಲಿ, ಕೇಳುಗರು ಆದಾಯ ತೆರಿಗೆ ರಿಟರ್ನ್ ಸಲ್ಲಿಕೆ, ಹಳೆಯ ಮತ್ತು ಹೊಸ ತೆರಿಗೆ ಪದ್ಧತಿ ಮತ್ತು ಇತರ ಆದಾಯ ತೆರಿಗೆ ಸಲ್ಲಿಕೆ ಪ್ರಕ್ರಿಯೆಗಳ ಬಗ್ಗೆ ಪ್ರಶ್ನೆಗಳನ್ನು ಕೇಳಲು ಅವಕಾಶವಿರುತ್ತದೆ. ಭಾಗವಹಿಸಲು, ಇಂದು ರಾತ್ರಿ ೯:೩೦ ಕ್ಕೆ ದೂರವಾಣಿ ಸಂಖ್ಯೆ ೦೧೧ - ೨೩೪೨೧೦೫೦ ಮತ್ತು ೦೧೧ - ೨೩೩೧೪೪೪೪ ಕ್ಕೆ ಕರೆ ಡಯಲ್ ಮಾಡಬಹುದು. ಪರ್ಯಾಯವಾಗಿ, ನಿಮ್ಮ ಪ್ರಶ್ನೆಗಳನ್ನು ವಾಟ್ಸ್‌ಅಪ್ ಮೂಲಕ ೯೨೮೯೦೯೪೦೪೪ ಸಂಖ್ಯೆಗೆ ಕಳುಹಿಸಬಹುದು. ಈ ನೇರ ಪ್ರಸಾರ ಆಕಾಶವಾಣಿ ಗೋಲ್ಡ್ ಚಾನೆಲ್ ಮತ್ತು ಹೆಚ್ಚುವರಿ ಆವರ್ತನಗಳಲ್ಲಿ ಮೂಡಿಬರಲಿದೆ. ಹೆಚ್ಚುವರಿಯಾಗಿ, ನ್ಯೂಸ್ ಆನ್ ಏರ್ ಡಾಟ್ ಜಿಒವಿ ಡಾಟ್ ಇನ್, ಯುಟ್ಯುಬ್ ಚ್ಯಾನಲ್ ಹಾಗೂ ನ್ಯೂಸ್ ಆನ್ ಏರ್ ಅಫಿಷಿಯಲ್ ನಲ್ಲೂ ಕಾರ್ಯಕ್ರಮ ಪ್ರಸಾರವಾಗುವುದು.

<><*<><>*><>

ಐಪಿಎಲ್ ಟಿ-೨೦ ಕ್ರಿಕೆಟ್‌ನಲ್ಲಿಂದು ಮುಂಬೈನ ವಾಂಖೆಡೆ ಕ್ರೀಡಾಂಗಣದಲ್ಲಿ ನಡೆಯಲಿರುವ ಪಂದ್ಯದಲ್ಲಿ ಮುಂಬೈ ಇಂಡಿಯನ್ಸ್ ತಂಡ ರಾಜಸ್ಥಾನ್ ರಾಯಲ್ಸ್ ತಂಡವನ್ನು ಎದುರಿಸಲಿದೆ. ಪಂದ್ಯ ರಾತ್ರಿ ೭.೩೦ ಕ್ಕೆ ಆರಂಭವಾಗಲಿದೆ. ಅಹಮದಾಬಾದ್‌ನ ನರೇಂದ್ರ ಮೋದಿ ಸ್ಟೇಡಿಯಂನಲ್ಲಿ ನೆನ್ನೆ ನಡೆದ ಐಪಿಎಲ್ ಮೊದಲ ಪಂದ್ಯದಲ್ಲಿ ಗುಜರಾತ್ ಟೈಟಾನ್ಸ್ ತಂಡ, ಸನ್ ರೈಸರ್ಸ್ ಹೈದರಾಬಾದ್ ವಿರುದ್ಧ ಏಳು ವಿಕೆಟ್‌ಗಳಿಂದ ಜಯಗಳಿಸಿತು. ವಿಶಾಖಪಟ್ಟನಂ ನ ವೈ.ಎಸ್.ರಾಜಶೇಖರ ರೆಡ್ಡಿ ಕ್ರೀಡಾಂಗಣದಲ್ಲಿ ನೆನ್ನೆ ನಡೆದ ಎರಡನೇ ಪಂದ್ಯದಲ್ಲಿ ಡೆಲ್ಲಿ ಕ್ಯಾಪಿಟಲ್ಸ್ ತಂಡ, ಚೆನ್ನೈ ಸೂಪರ್ ಕಿಂಗ್ಸ್ ತಂಡವನ್ನು ಇಪತ್ತು ರನ್‌ಗಳಿಂದ ಪರಾಭವಗೊಳಿಸಿತು.

<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>

<><*<> ನಮ್ಮ ಮುಂದಿನ ವಾರ್ತಾರ ಅಪರಾಹ್ನ ೨.೩೦ ಕ್ಕೆ <>*><>